155ನೇ ಸಂ. 72 = (83)
4FK
1308

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ' ಸೋಜಾ ಇವರು ನಿಯಮ 73ರ ಅಡಿಯಲ್ಲಿ ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ(ಸೂಚನೆ ಸಂಖ್ಯೆ: 83)

**:ವಿಷಯ:**

ಮಂಗಳೂರಿನ ಕದ್ರಿ ಹಿಲ್ಸ್‌ನಲ್ಲಿರುವ ಕರ್ನಾಟಕ (ಸರ್ಕಾರಿ) ಪಾಲಿಟೆಕ್ನಿಕ್, ತಾಂತ್ರಿಕ ಶಿಕ್ಷಣಗಳಲ್ಲಿ ಒಂದಾಗಿದ್ದು, 1946ರಲ್ಲಿ ಪ್ರಾರಂಭಗೊಂಡ ಲಕ್ಷಾಂತರ ಮಕ್ಕಳಿಗೆ ತಾಂತ್ರಿಕ ಶಿಕ್ಷಣ ನೀಡುತ್ತಿರುವ ಸಂಸ್ಥೆಯು ಪ್ರಸ್ತುತ 1500 ಡಿಪ್ಲೋಮಾ ಶಿಕ್ಷಣ ಪಡೆಯುತ್ತಿದ್ದಾರೆ. ಸದರಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯ ಒದಗಿಸಿಕೊಡುವಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆ ವಿಫಲಗೊಂಡಿರುವ ಬಗ್ಗೆ.

**:ಉತ್ತರ:**

ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು ಸಂಸ್ಥೆಯಲ್ಲಿನ ಪಾಲಿಮರ್ ಕೆಮಿಕಲ್ ಮತ್ತು ಇಲೆಕ್ಟ್ರಾನಿಕ್ಸ್ ವಿಭಾಗದ ಕಟ್ಟಡ ದುರಸ್ತಿ ಹಾಗೂ ಇತರೆ ನವೀಕರಣ ಕಾಮಗಾರಿಗೆ ಸಂಬಂಧಿಸಿದಂತೆ 2020-21ನೇ ಸಾಲಿಗೆ ಅಂದಾಜು ಮೊತ್ತ ರೂ. 200.00 ಲಕ್ಷಗಳ ಕಾಮಗಾರಿಯನ್ನು ಮಂಜೂರು ಮಾಡಲಾಗಿದ್ದು, ಪ್ರಸ್ತುತ ಕಾಮಗಾರಿಯು ಪೂರ್ಣಗೊಂಡು ಹಸ್ತಾಂತರವಾಗಿರುತ್ತದೆ. 2020-21ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ರೂ.300.00 ಲಕ್ಷಗಳ ಬಾಲಕರ ವಸತಿ ನಿಲಯ ಕಾಮಗಾರಿಯನ್ನು ಮಂಜೂರು ಮಾಡಲಾಗಿದ್ದು, ಪ್ರಸ್ತುತ ಕಾಮಗಾರಿಯು ಪೂರ್ಣಗೊಂಡು ಹಸ್ತಾಂತರವಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 33 ಹೆಚ್‌ಪಿಟಿ 2022, ದಿನಾಂಕ: 14/07/2022 ರಂತೆ 2022-23ನೇ ಸಾಲಿನಿಂದ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಗಳಿಂದ ಸಂಗ್ರಹಿಸಲಾಗುವ ಸರ್ಕಾರಿ ಶುಲ್ಕಗಳನ್ನು ಸಂಸ್ಥೆಯಲ್ಲಿ ಉಳಿಸಿಕೊಂಡು ಗ್ರಂಥಾಲಯಕ್ಕೆ ಪುಸ್ತಕ ಖರೀದಿ ಹಾಗೂ ಸಂಬಂಧಪಟ್ಟ ವೆಚ್ಚಗಳು, ಪೀಠೋಪಕರಣ ಖರೀದಿ/ದುರಸ್ತಿ, ಪ್ರಯೋಗಾಲಯ ಉಪಕರಣ ಹಾಗೂ ದಿನಬಳಕೆ ಸಾಮಾಗ್ರಿಗಳ ಖರೀದಿ ಮತ್ತು ಇಂಟರ್ನೆಟ್ ಸೌಲಭ್ಯ ವೆಚ್ಚ ಭರಿಸಲು ಅನುಮತಿ ನೀಡಿರುವುದರಿಂದ ಸಂಸ್ಥೆಯಲ್ಲಿ ಸಂಗ್ರಹವಾಗುವ ಅನುದಾನದಲ್ಲಿ ಸಂಸ್ಥೆಗೆ ಅವಶ್ಯಕತೆ ಅನುಗುಣವಾಗಿ ಅಗತ್ಯವಿರುವ ಸಂಪನ್ಮೂಲಗಳನ್ನು ಒದಗಿಸಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.

ಅಲ್ಲದೇ ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು ಸಂಸ್ಥೆಯ ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ ಹಾಗೂ ಕಂಪ್ಯೂಟರ್ ಸೈನ್ಸ್ ವಿಭಾಗಗಳಿಗೆ ಅವಶ್ಯವಿರುವ ತರಗತಿ ಕೊಠಡಿ, ಪ್ರಯೋಗಾಲಯ ಕೊಠಡಿ, ಗ್ರಂಥಾಲಯ ಕಟ್ಟಡ ಹಾಗೂ ಉಪಹಾರ ಗೃಹ ನಿರ್ಮಾಣ ಮತ್ತು ಪಾಲಿಮರ್ ಮತು ಕೆಮಿಕಲ್ ವಿಭಾಗಗಳ ಕಟ್ಟಡದ ದುರಸ್ತಿ ಕಾಮಗಾರಿಗಳನ್ನು ಅಂದಾಜು ರೂ.1445.00 ಲಕ್ಷಗಳಲ್ಲಿ ಕೈಗೊಳ್ಳಲು ಅನುದಾನ ಲಭ್ಯತೆಯನುಸಾರ ಕಾಮಗಾರಿ ಕೈಗೊಳ್ಳಲು ಕ್ರಮವಹಿಸಲಾಗುತ್ತದೆ.

ಸಂಖ್ಯೆ: ಇಡಿ 73 ಹೆಚ್‌ಪಿಟಿ 2024)

(ಡಾ. ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು